# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **2103**

ಸದಸ್ಯರ ಹೆಸರು : **ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸಬೇಕಾದ ದಿನಾಂಕ : 25-03-2026

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಸಾರಿಗೆ ಇಲಾಖೆಯಲ್ಲಿ ಹೊರರಾಜ್ಯದ ಸುಮಾರು 10 ಸಾವಿರ ವಾಹನಗಳಿಗೆ ನಿಯಮಬಾಹಿರವಾಗಿ ಅರ್ಹತಾ ಪ್ರಮಾಣಪತ್ರ (FC) ನವೀಕರಿಸಿಕೊಟ್ಟಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಾದೇಶಿಕ ಸಾರಿಗೆ ಕಛೇರಿ, ಬೆಂಗಳೂರು (ಕೇಂದ್ರ) ಇಲ್ಲಿ ಹೊರ ರಾಜ್ಯದ ಸುಮಾರು ಹತ್ತು ಸಾವಿರಕ್ಕೂ ಹೆಚ್ಚು ಸಾರಿಗೆ ವಾಹನಗಳನ್ನು ಭೌತಿಕವಾಗಿ ಪರಿಶೀಲಿಸದೇ ಅರ್ಹತಾ ಪ್ರಮಾಣ ಪತ್ರ (FC) ನವೀಕರಿಸಿರುವುದಾಗಿ ದೂರು ಬಂದಿರುತ್ತದೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ಗುಜರಾತ್ ರಾಜ್ಯದ ಸಾರಿಗೆ ಇಲಾಖೆಯಿಂದ ಸುಮಾರು **41 ವಾಹನಗಳಿಗೆ** ಭೌತಿಕವಾಗಿ ಪರಿಶೀಲಿಸದೇ ಅರ್ಹತಾ ಪ್ರಮಾಣ ಪತ್ರ ನವೀಕರಿಸಿರುವುದಾಗಿ ಪತ್ರ ಬಂದ ಹಿನ್ನೆಲೆಯಲ್ಲಿ ಪರಿಶೀಲಿಸಲಾಗಿ, ಒಂದೇ ಲಾಗಿನ್ ನಲ್ಲಿ ಅರ್ಹತಾ ಪತ್ರ ನವೀಕರಿಸಿರುವುದು ಕಂಡು ಬಂದ ಹಿನ್ನೆಲೆಯಲ್ಲಿ ಶ್ರೀ ನಿಸ್ಸಾರ್ ಅಹಮದ್, ಹಿರಿಯ ಮೋಟಾರು ವಾಹನ ನಿರೀಕ್ಷಕರು ಇವರನ್ನು ಅಮಾನತ್ತುಗೊಳಿಸಲಾಗಿದೆ.<br><br>ಮುಂದುವರೆದು, ಉಳಿದ ಹೊರ ರಾಜ್ಯದ ವಾಹನಗಳನ್ನು ಭೌತಿಕವಾಗಿ ಪರಿಶೀಲಿಸದೇ ಅರ್ಹತಾ ಪ್ರಮಾಣ ಪತ್ರ ನೀಡಿರುವ ಸಂಬಂಧ ಹೆಚ್ಚಿನ ತನಿಖೆಗಾಗಿ ಪೊಲೀಸ್ ಠಾಣೆಯಲ್ಲಿ ಸಂಬಂಧಪಟ್ಟ ಅಧಿಕಾರಿಯ ವಿರುದ್ಧ ಮೊಕದ್ದಮೆ ದಾಖಲಿಸಲಾಗಿರುತ್ತದೆ. ಪ್ರಕರಣವು ವಿಚಾರಣಾ ಹಂತದಲ್ಲಿರುತ್ತದೆ. |
| (ಆ) | ಗುಜರಾತ್, ಮಹಾರಾಷ್ಟ್ರ ಮತ್ತು ಕೇರಳ ರಾಜ್ಯಗಳ ವಾಹನಗಳನ್ನು ಭೌತಿಕವಾಗಿ ಪರಿಶೀಲಿಸಿದೆಯೇ ಕೇವಲ ದಾಖಲೆಗಳ ಮೂಲಕ ನವೀಕರಣ ಮಾಡಿರುವುದು ನಿಜವೇ; ಈ ಅಕ್ರಮದಲ್ಲಿ ಭಾಗಿಯಾಗಿರುವ ಮೋಟಾರು ವಾಹನ ನಿರೀಕ್ಷಕರುಗಳ (IMV) ವಿರುದ್ಧ ಸರ್ಕಾರ ಕೈಗೊಂಡಿರುವ ಶಿಸ್ತುಕ್ರಮಗಳೇನು; | ಗುಜರಾತ್ ರಾಜ್ಯದ ಸಾರಿಗೆ ಕಛೇರಿಯ ಇ-ಡಿಟೆಕ್ಷನ್ ತಂಡವು ವಾಹನ ಇ-ಡಿಟೆಕ್ಷನ್ ಪೋರ್ಟಲ್‌ನಲ್ಲಿ ಲಭ್ಯವಿರುವ ಡೇಟಾವನ್ನು ಪರಿಶೀಲಿಸಿದ ನಂತರ, ದಿ:29.12.2025ರ ಪತ್ರದೊಂದಿಗೆ ಸಲ್ಲಿಸಿರುವ ಅಡಕದಲ್ಲಿ 41 ವಾಹನಗಳನ್ನು ಬೆಂಗಳೂರು(ಕೇಂದ್ರ) ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ ತಪಾಸಣೆ ಮಾಡಿ ನಮೂನೆ-38 (ಎ) (Fitness Certificate) ನೀಡಿದ ನಂತರ, ಅದೇ ದಿನ ಗುಜರಾತ್ ರಾಜ್ಯದಲ್ಲಿರುವ ಟೋಲ್ ಪ್ಲಾಜಾಗಳ ಮೂಲಕ |

| | ಪ್ರಶ್ನೆ | ಉತ್ತರ |
|---|---|---|
| | | ಸದರಿ ವಾಹನಗಳು ಹಾದುಹೋಗಿವೆ ಎಂದು ಪತ್ರ ಬಂದ ಹಿನ್ನೆಲೆಯಲ್ಲಿ, ಜಂಟಿ ಸಾರಿಗೆ ಆಯುಕ್ತರು, ಬೆಂಗಳೂರು ನಗರ ವಿಭಾಗ, ಬೆಂಗಳೂರು ಇವರು ದಿನಾಂಕ:20.01.2026ರ ವರದಿಯನ್ನು ಸಲ್ಲಿಸಿದ್ದು, ಅದರಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ, ಬೆಂಗಳೂರು (ಕೇಂದ್ರ) ದಲ್ಲಿರುವ ಹಿರಿಯ ಮೋಟಾರು ವಾಹನ ನಿರೀಕ್ಷಕರಾದ ಶ್ರೀ ನಿಸ್ಸಾರ್ ಅಹಮದ್‌ರವರು ಸದರಿ 41 ವಾಹನಗಳಿಗೆ ನಮೂನೆ-38(ಎ) ರಲ್ಲಿ ಅರ್ಹತಾ ಪತ್ರ ನವೀಕರಣ ಮಾಡಿರುವುದಾಗಿ ಇಲಾಖೆಯ ವಾಹನ್ 4.0 ತಂತ್ರಾಂಶದನ್ವಯ ದೃಢಪಟ್ಟಿರುತ್ತದೆ ಎಂದು ತಿಳಿಸಿರುತ್ತಾರೆ. ಸದರಿ ವರದಿಯನ್ನು ಆಧರಿಸಿ ಶ್ರೀ ನಿಸ್ಸಾರ್ ಅಹಮದ್, ಹಿರಿಯ ಮೋಟಾರು ವಾಹನ ನಿರೀಕ್ಷಕರು ಇವರನ್ನು ದಿನಾಂಕ:20.01.2026ರಂದು ಸರ್ಕಾರಿ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಲಾಗಿದೆ. ಮುಂದುವರಿದು, ಸದರಿಯವರ ವಿರುದ್ಧ ಹೆಚ್ಚಿನ ತನಿಖೆಗಾಗಿ ಹೆಚ್.ಆರ್.ಎಸ್ ಲೇಔಟ್ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ನಂ.0096/2026 ರ ರೀತ್ಯಾ ಕ್ರಿಮಿನಲ್ ಪ್ರಕರಣವನ್ನು ಸಹ ದಾಖಲಿಸಲಾಗಿರುತ್ತದೆ. |
| (ಇ) | ಈ ಹಗರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಅಮಾನತ್ತುಗೊಂಡಿರುವ ಹಿರಿಯ ಮೋಟಾರು ವಾಹನ ನಿರೀಕ್ಷಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗಿದೆಯೇ; ಇಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣವೇನು; | ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಶ್ರೀ ನಿಸ್ಸಾರ್ ಅಹಮದ್, ಹಿರಿಯ ಮೋಟಾರು ವಾಹನ ನಿರೀಕ್ಷಕ(ನಿವೃತ್ತ) ಇವರ ವಿರುದ್ಧ ಹೆಚ್.ಎಸ್.ಆರ್. ಲೇಔಟ್ ಪೊಲೀಸ್ ಠಾಣೆಯಲ್ಲಿ ಕ್ರೈಂ ನಂ. 0096/2026 ರ ರೀತ್ಯಾ ಕ್ರಿಮಿನಲ್ ಪ್ರಕರಣವನ್ನು ದಿನಾಂಕ:28.02.2026 ರಂದು ದಾಖಲಿಸಲಾಗಿರುತ್ತದೆ. |
| (ಈ) | ಇಂತಹ ಅಕ್ರಮಗಳನ್ನು ತಡೆಗಟ್ಟಲು ಸಾರಿಗೆ ಇಲಾಖೆಯ 'ಇ-ಡಿಸ್ಟ್ರಿಕ್ಟ್' (e-District) ಪೋರ್ಟಲ್ ಅಥವಾ ತಾಂತ್ರಿಕ ವ್ಯವಸ್ಥೆಯಲ್ಲಿ ಸರ್ಕಾರ ತರಲು ಉದ್ದೇಶಿಸಿರುವ ಸುಧಾರಣೆಗಳೇನು? | ರಾಜ್ಯದಲ್ಲಿ ನೋಂದಣಿಯಾಗಿ ಚಾಲ್ತಿಯಲ್ಲಿರುವ ವಾಣಿಜ್ಯ ವಾಹನಗಳ ಅರ್ಹತಾ ಪ್ರಮಾಣ ಪತ್ರವನ್ನು ವಾಹನಗಳನ್ನು ಭೌತಿಕವಾಗಿ ಪರಿಶೀಲಿಸಿದ ನಂತರವೇ ನೀಡಲು ಸಾರಿಗೆ ಇಲಾಖೆಯು Geo-fencing ಆಧಾರಿತ mVahan ಫಿಟ್ನೆಸ್ ಮೊಬೈಲ್ ಅಪ್ಲಿಕೇಷನ್ ಅನ್ನು ರಾಜ್ಯಾದ್ಯಾಂತ ಎಲ್ಲಾ 66 ಪ್ರಾ.ಸಾ.ಅ ಕಛೇರಿಗಳಲ್ಲಿ ದಿನಾಂಕ:18.02.2026 ರಿಂದ ಆರಂಭಿಸಲಾಗಿರುತ್ತದೆ. |

| | ಪ್ರಶ್ನೆ | ಉತ್ತರ |
|---|---|---|
| | | ಈ ಕುರಿತು ಸಾರ್ವಜನಿಕರಲ್ಲಿ ಮತ್ತು ವಾಹನ ಮಾಲೀಕರಿಗೆ ಜಾಗೃತಿ ಮೂಡಿಸುವ ಸಲುವಾಗಿ ರಾಜ್ಯದ ಎಲ್ಲಾ ಪ್ರಮುಖ ದಿನಪತ್ರಿಕೆಗಳಲ್ಲಿ ದಿನಾಂಕ: 08-03-2026ರಂದು ಪತ್ರಿಕಾ ಜಾಹೀರಾತು ನೀಡಲಾಗಿದೆ. ಪ್ರತಿಯನ್ನು **ಅನುಬಂಧದಲ್ಲಿ** ಒದಗಿಸಿದೆ.<br><br>Geo-fencing ಆಧಾರಿತ mVahan ಫಿಟ್ನೆಸ್ ಮೊಬೈಲ್ ಅಪ್ಲಿಕೇಷನ್ ಆರಂಭಿಸಿರುವುದರಿಂದಾಗಿ ಅರ್ಹತಾ ಪತ್ರಗಳನ್ನು ನವೀಕರಿಸಲು ಸಂಬಂಧಪಟ್ಟ ವಾಹನಗಳನ್ನು ಕಡ್ಡಾಯವಾಗಿ ಕಛೇರಿಗಳಿಗೆ ಹಾಜರುಪಡಿಸಬೇಕಾಗಿದ್ದು, ಅಂತಹ ವಾಹನಗಳ ಛಾಯಾಚಿತ್ರ ಮತ್ತು GPS co-ordinates ಗಳನ್ನು ಪಡೆದು ವಾಹನವನ್ನು ಪರಿಶೀಲಿಸುವ ಅಧಿಕಾರಿ ಹಾಗೂ ವಾಹನದ ಪೂರ್ಣ ಛಾಯಾಚಿತ್ರದೊಂದಿಗೆ (ವಾಹನದ ನೋಂದಣಿ ಸಂಖ್ಯೆ) ಸೇರಿದಂತೆ GPS Photo Location App ಬಳಸಿ ವಿವರಗಳನ್ನು ದಾಖಲಿಸಿದ ನಂತರವಷ್ಟೇ ಅರ್ಹತಾ ಪತ್ರಗಳನ್ನು ನವೀಕರಿಸಲು ಕ್ರಮವಹಿಸಲಾಗುತ್ತಿದೆ. |

**ಟಿಡಿ 2 ಟಿಡಿಕ್ಯೂ 2026**

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು.

ಅನುಬಂಧ



ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

# ಕರ್ನಾಟಕ ರಾಜ್ಯದ
# 66 ಆರ್ ಟಿ ಒ ಕಛೇರಿಗಳಲ್ಲಿ Geo-fencing ಆಧಾರಿತ mVahan ಫಿಟ್ನೆಸ್ ಮೊಬೈಲ್ ಅಪ್ಲಿಕೇಷನ್ ಅನುಷ್ಠಾನ

1. ರಾಜ್ಯದಲ್ಲಿ ನೋಂದಣಿಯಾಗಿ ಚಾಲ್ತಿಯಲ್ಲಿರುವ ವಾಣಿಜ್ಯ (ಸಾರಿಗೆ) ವಾಹನಗಳ ಅರ್ಹತಾ (ಫಿಟ್ನೆಸ್) ಪ್ರಮಾಣ ಪತ್ರ ವಿತರಣೆಯಲ್ಲಿ ನಡೆಯುತ್ತಿದ್ದ ದೋಷಪೂರಿತ ಕ್ರಮಗಳನ್ನು ತಡೆಯುವ ಸಲುವಾಗಿ ಸಾರಿಗೆ ಇಲಾಖೆಯು Geo-fencing ಆಧಾರಿತ mVahan ಫಿಟ್ನೆಸ್ ಮೊಬೈಲ್ ಅಪ್ಲಿಕೇಷನ್ ನನ್ನು ರಾಜ್ಯಾದ್ಯಂತ ಎಲ್ಲಾ 66 ಆರ್ ಟಿ ಓ ಕಛೇರಿಗಳಲ್ಲಿ ಆರಂಭಿಸಲಾಗಿದೆ.
2. ಸಾರಿಗೆ ಇಲಾಖೆಯು ರಾಜ್ಯದ ಎಲ್ಲಾ ಆರ್ ಟಿ ಓ ಕಛೇರಿಗಳಲ್ಲಿ mVahan ಫಿಟ್ನೆಸ್ ಮೊಬೈಲ್ ಅಪ್ಲಿಕೇಷನ್ ಎಂದು ಕರೆಯಲ್ಪಡುವ ಈ ವ್ಯವಸ್ಥೆಯು ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿರುತ್ತದೆ ಹಾಗೂ ಈ ಮೂಲಕ ವಾಹನ ಮಾಲೀಕರು ಮತ್ತು ಸಾರ್ವಜನಿಕರ ವಿಶ್ವಾಸಾರ್ಹತೆ ಹೆಚ್ಚಾಗಿದೆ.
3. ವಾಹನಗಳ ಸಮರ್ಪಕ ಪರಿಶೀಲನೆಯ ನಂತರ ಮಾತ್ರ ಅರ್ಹತಾ (ಫಿಟ್ನೆಸ್) ಪ್ರಮಾಣಪತ್ರಗಳನ್ನು ನೀಡಲಾಗುವಂತೆ ಖಚಿತಪಡಿಸಿಕೊಳ್ಳಲು ಹಾಗೂ ಸಂಭವನೀಯ ಎಲ್ಲಾ ದೋಷಗಳನ್ನು ನಿವಾರಿಸುವ ಉದ್ದೇಶದಿಂದ ಈ ಹೊಸ ವ್ಯವಸ್ಥೆಯನ್ನು ಪರಿಚಯಿಸಲಾಗಿದೆ.
4. ಕರ್ನಾಟಕ ರಾಜ್ಯದಲ್ಲಿ ಸುಮಾರು 30 ಲಕ್ಷಕ್ಕೂ ಹೆಚ್ಚು ವಾಣಿಜ್ಯ (ಸಾರಿಗೆ) ವಾಹನಗಳು ನೋಂದಣಿಯಾಗಿ ಚಾಲ್ತಿಯಲ್ಲಿದ್ದು, ವಾಹನಗಳ ಅರ್ಹತಾ (ಫಿಟ್ನೆಸ್) ಪ್ರಮಾಣ ಪತ್ರ ನೀಡುವಿಕೆಯಲ್ಲಿ ಖಚಿತತೆ ಇಲ್ಲ, ಪಾರದರ್ಶಕ ವ್ಯವಸ್ಥೆಯಿಲ್ಲ ಎಂಬ ಆರೋಪಗಳು ಆಗಾಗ್ಗೆ ಕೇಳಿ ಬರುತ್ತಿದ್ದವು.
5. ಈ ಹಿನ್ನೆಲೆಯಲ್ಲಿ NIC ಅಭಿವೃದ್ಧಿಪಡಿಸಿರುವ ಹೊಸ mVahan ಫಿಟ್ನೆಸ್ ಮೊಬೈಲ್ ಅಪ್ಲಿಕೇಷನ್ ಅನ್ನು ಜಾರಿಗೆ ತರಲಾಗಿದೆ.
6. ಈ ಅಪ್ಲಿಕೇಷನ್ ಮೂಲಕ ಪ್ರತಿಯೊಂದು ಆರ್.ಟಿ.ಓ. ಕಛೇರಿಗಳಿಗೆ ವಾಹನಗಳನ್ನು ಭೌತಿಕವಾಗಿ ಪರಿಶೀಲಿಸಲಾಗುವ ಪ್ರದೇಶಗಳನ್ನು ನಿಗದಿಪಡಿಸಿ Geo-fencing ಮಾಡಲಾಗಿದೆ.
7. ನಿಗದಿತ ಪ್ರದೇಶಗಳಿಗೆ ವಾಹನಗಳು ಭೌತಿಕವಾಗಿ ಹಾಜರಾದ ನಂತರವೇ ಮೋಟಾರು ವಾಹನ ತಪಾಸಕರು ಮತ್ತು ನಿಯಮಾನುಸಾರ ಪರಿಶೀಲನೆ ನಡೆಸಲಾಗುತ್ತದೆ.
8. ಪರಿಶೀಲನೆಯ ವೇಳೆ ವಾಹನದ ವಿವಿಧ ಆರು (6) ಛಾಯಾಚಿತ್ರಗಳನ್ನು ಕಡ್ಡಾಯವಾಗಿ ತೆಗೆದು ಅಪ್ಲಿಕೇಷನ್ನಲ್ಲಿ ಅನುಮೋದನೆಗೊಂಡ ನಂತರವೇ ವಾಹನದ ಅರ್ಹತಾ ಪ್ರಮಾಣ ಪತ್ರ ನೀಡಲಾಗುತ್ತದೆ.
9. ಈಗಾಗಲೇ ನಿಗದಿಪಡಿಸಿರುವ ನಿಗದಿತ ಪ್ರದೇಶಗಳನ್ನು ಹೊರತುಪಡಿಸಿ ಇನ್ನಿತರ ಪ್ರದೇಶಗಳಲ್ಲಿ ವಾಹನದ ಅರ್ಹತಾ ಪ್ರಮಾಣ ಪತ್ರವನ್ನು ನೀಡಲು ಸಾಧ್ಯವಿರುವುದಿಲ್ಲ.
10. ವಾಹನದ ಅರ್ಹತಾ ಪ್ರಮಾಣ ಪತ್ರ ಕೋರಿ ಬರುವ ವಾಹನಗಳ ಪೈಕಿ ಶೇಕಡ 20 % ವಾಹನಗಳನ್ನು ಮರುಪರಿಶೀಲನೆ ಮಾಡಲು ನೋಂದಣಿ ಪ್ರಾಧಿಕಾರಗಳಿಗೆ ಸೂಚನೆಯನ್ನು ನೀಡಲಾಗಿದೆ.
11. mVahan ಫಿಟ್ನೆಸ್ ಮೊಬೈಲ್ ಅಪ್ಲಿಕೇಷನ್‌ನ್ನು ದೇಶದ ಕೆಲವು ರಾಜ್ಯಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದು, ಕರ್ನಾಟಕ ರಾಜ್ಯದಲ್ಲಿಯೂ ಪ್ರಸ್ತುತ ಅಳವಡಿಸಿಕೊಳ್ಳಲಾಗುತ್ತದೆ.
12. ರಸ್ತೆ ಅಪಘಾತಗಳನ್ನು ಕಡಿಮೆಗೊಳಿಸಲು ಹಾಗೂ ಸಮಗ್ರ ರಸ್ತೆ ಸುರಕ್ಷತೆಯನ್ನು ಹೆಚ್ಚಿಸಲು ಈ ವ್ಯವಸ್ಥೆ ಸಹಾಯಕವಾಗಲಿದೆ.
13. ಈ ಉಪಕ್ರಮದ ಮೂಲಕ ವಿಳಂಬರಹಿತವಾಗಿ ಅರ್ಹತಾ ಪ್ರಮಾಣ ಪತ್ರ ನೀಡಿಕೆಯಲ್ಲಿ ಕೇಳಿ ಬರುತ್ತಿದ್ದ ಆರೋಪಗಳಿಗೆ ತೆರೆ ಬೀಳಲಿದೆ.

ಸಹಿ/-
ಆಯುಕ್ತರು
ಸಾರಿಗೆ ಮತ್ತು ರಸ್ತೆ ಸುರಕ್ಷತೆ



ಮಾನ್ಯ ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವರಾದ
ಶ್ರೀ ರಾಮಲಿಂಗಾ ರೆಡ್ಡಿ
ಅವರು ಇಲಾಖಾ ಕಾರ್ಯಕ್ರಮದಲ್ಲಿ ಭಾಗವಹಿಸಿದ ಸಂದರ್ಭ

